ತೊಗರಿ ಮಂಡಳಿಯು ಮಾಡಿರುವ ಖರೀದಿ

289(694); ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ)

ಅ) ಹೈದರಾಬಾದ್ ಕರ್ನಾಟಕ ಭಾಗದಲ್ಲಿ ಬರುವ ಜಿಲ್ಲೆಗಳಿಂದ ತೊಗರಿ ಮಂಡಳಿಯವರು ಕಳೆದ ಒಂದು ವರ್ಷದ ಅವಧಿಯಲ್ಲಿ ಎಷ್ಟು ಪ್ರಮಾಣದ ತೊಗರಿಬೇಳೆಯನ್ನು ಖರೀದಿಸಿದ್ದಾರೆ? ಮತ್ತು ಇದಕ್ಕೆ ತಗುಲಿದ ವೆಚ್ಚವೆಷ್ಟು? ಇದಕ್ಕೆ ನೀಡಲಾದ ಬೆಂಬಲ ಬೆಲೆಯ ವೆಚ್ಚವೆಷ್ಟು;

ಆ) ಈ ಖರೀದಿ ಉಸ್ತುವಾರಿಯನ್ನು ಯಾವ ಸಂಸ್ಥೆಗೆ ನೀಡಲಾಗಿದೆ ಮತ್ತು ಇದನ್ನು ನೀಡುವ ಮೊದಲು ಅನುಸರಿಸಿರುವ ಮಾನದಂಡಗಳೇನು?

ಡಾ॥ ಶ್ಯಾಮನೂರ ಶಿವಶಂಕರಪ್ಪ (ಮಾನ್ಯ ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರು)

ಅ)

1. ಒಂದು ವರ್ಷದಲ್ಲಿ 1,97,774 ಕ್ವಿಂಟಾಲ್ ತೊಗರಿಯನ್ನು ಖರೀದಿ ಮಾಡಲಾಗಿದೆ.
2. ಒಟ್ಟು ₹ 108,28,12,650/– ತಗಲಿದ ವೆಚ್ಚ
3. ಪ್ರತಿ ಕ್ವಿಂಟಾಲ್‌ಗೆ ₹ 4300/– ರಂತೆ ಬೆಂಬಲ ಬೆಲೆ ಹಾಗೂ ಕರ್ನಾಟಕ ಸರ್ಕಾರದಿಂದ ಸಹಾಯಧನ ಪ್ರತಿ ಕ್ವಿಂಟಾಲ್‌ಗೆ ₹ 700/– ರಂತೆ ಒಟ್ಟು ₹ 5000/–ಗಳಲ್ಲಿ ಖರೀದಿಸಲಾಗಿದೆ.

ಆ) ಸರ್ಕಾರದ ಆದೇಶ ಸಂಖ್ಯೆ:ಸಇ429 ಎಂಆರ್‌ಇ(1) ದಿನಾಂಕ: 26.12.2013 ರ ಆದೇಶದ ಅನ್ವಯ ಕರ್ನಾಟಕ ತೊಗರಿ ಅಭಿವೃದ್ಧಿ ಮಂಡಳಿ ನಿಯಮಿತ ಗುಲ್ಬರ್ಗಾ ಇವರಿಗೆ ಎನ್.ಸಿ.ಡಿ.ಎಕ್ಸ್. ಸಂಸ್ಥೆಯ ಸಹಯೋಗದೊಂದಿಗೆ ಖರೀದಿಸಲು ವಹಿಸಲಾಗಿದೆ. ಕನಿಷ್ಠ ಬೆಂಬಲ ಯೋಜನೆ ಅಡಿಯಲ್ಲಿ ತೊಗರಿ ಖರೀದಿಯನ್ನು NCDEX ಸ್ಪಾಟ್ ಎಕ್ಸ್‌ಚೇಂಜ್ ಸಂಸ್ಥೆಗೆ ಉಸ್ತುವಾರಿ ವಹಿಸಲಾಗಿದೆ.

ಮಾನದಂಡ ವಿಧಿಸಿರುವ ಆದೇಶದ ಪ್ರತಿಯನ್ನು ಅನುಬಂಧದಲ್ಲಿ ನೀಡಲಾಗಿದೆ.

ಅನುಬಂಧ

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2013–14ನೇ ಸಾಲಿಗೆ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ತೊಗರಿಯನ್ನು ಖರೀದಿಸುವ ಕುರಿತು ಆದೇಶ

ಸರ್ಕಾರದ ಆದೇಶ ಸಂಖ್ಯೆ: ಸಇ 429 ಎಂಆರ್‌ಇ 2013(1), ಬೆಂಗಳೂರು ದಿನಾಂಕ: 26/12/2013

ಓದಲಾಗಿದೆ: 1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತೊಗರಿ ಅಭಿವೃದ್ಧಿ ಮಂಡಳಿ ನಿಯಮಿತ ಗುಲ್ಬರ್ಗಾ ಇವರ ಪತ್ರ ಸಂಖ್ಯೆ: ಕತೋಅಮಂನಿಗು/ತೊಗರಿ ಪ್ರೋ.ಬೆಲೆ/2013–14, ದಿನಾಂಕ 20.12.2013

2. ದಿನಾಂಕ:23.12.2013 ರಂದು ಅಧ್ಯಕ್ಷರು, ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳ ಬೆಲೆ ಸ್ಥಿರೀಕರಣ ಸಚಿವ ಸಂಪುಟ ಉಪ ಸಮಿತಿ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು

ಪ್ರಸ್ತಾವನೆ:

ಮೇಲೆ ಓದಲಾದ (1)ರ ದಿನಾಂಕ:20.12.2013ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತೊಗರಿ ಅಭಿವೃದ್ಧಿ ಮಂಡಳಿ, ಗುಲ್ಬರ್ಗಾ ಇವರು ದಿನಾಂಕ: 18.12.2013 ರಂದು ಜಿಲ್ಲಾಧಿಕಾರಿಗಳು ಗುಲ್ಬರ್ಗಾ ಜಿಲ್ಲೆ, ಇವರ ಅಧ್ಯಕ್ಷತೆಯಲ್ಲಿ ನಡೆದ ಟಾಸ್ಕ್‌ಫೋರ್ಸ್ ಸಮಿತಿ ಸಭೆಯ ತೀರ್ಮಾನದಂತೆ ಗುಲ್ಬರ್ಗಾ, ಬೀದರ್, ಯಾದಗಿರಿ ಹಾಗೂ ಬಿಜಾಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಿಗೆ ಡಿಸೆಂಬರ್ 3 ರಿಂದ

ಅವಕವಾದ ತೊಗರಿಯ ಬೆಲೆಯು ಕೇಂದ್ರ ಸರ್ಕಾರವು ನಿಗಧಿಪಡಿಸಿರುವ ₹ 4300 ಕ್ಕಿಂತ ಕಡಿಮೆ ಬೆಲೆಯಲ್ಲಿ ಮಾರಾಟವಾಗುತ್ತಿದ್ದು, ಪ್ರತಿ ವರ್ಷದಂತೆ ಈ ವರ್ಷವೂ ಗುಲ್ಬರ್ಗಾ, ಬೀದರ್, ಯಾದಗಿರಿ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಒಟ್ಟು 16 ಕೇಂದ್ರಗಳನ್ನು ತೆಗೆದು ಎನ್.ಸಿ.ಡಿ.ಇ.ಎಕ್ಸ್ ಸ್ಪಾಟ್ ಎಕ್ಸ್‌ಚೇಂಜ್ ಮುಖಾಂತರ ತೊಗರಿ ಖರೀದಿ ಪ್ರಕ್ರಿಯೆಯನ್ನು ಸರ್ಕಾರವು ನಿಗಧಪಡಿಸುವ ಬೆಲೆ ಹಾಗೂ ಪ್ರೋತ್ಸಾಹಧನದೊಂದಿಗೆ ತೊಗರಿ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸಲು ಅನುಮತಿ ನೀಡುವಂತೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ(2)ರ ಅಧ್ಯಕ್ಷರು, ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳ ಬೆಲೆ ಸ್ಥಿರೀಕರಣ ಸಚಿವ ಸಂಪುಟ ಉಪ ಸಮಿತಿ ದಿನಾಂಕ:23.12.2013 ರಂದು ಜರುಗಿದ ಸಭೆಯ ತೀರ್ಮಾನದಂತೆ 2013–14ನೇ ಸಾಲಿನಲ್ಲಿ ಕೇಂದ್ರ ಸರ್ಕಾರವು ಎಫ್.ಎ.ಕ್ಯೂ ಗುಣಮಟ್ಟದ ತೊಗರಿಗೆ ಘೋಷಿಸಿದ ಬೆಂಬಲ ಬೆಲೆ ಪ್ರತಿ ಕ್ವಿಂಟಾಲಿಗೆ ₹ 4300/–ಗಳ ಜೊತೆಗೆ ರಾಜ್ಯ ಸರ್ಕಾರದಿಂದ ₹ 700/–ಗಳನ್ನು ಪ್ರತಿ ಕ್ವಿಂಟಲಿಗೆ ಸಹಾಯಧನ ನೀಡಿ ಒಟ್ಟು ಪ್ರತಿ ಕ್ವಿಂಟಲಿಗೆ ₹ 5000/– ರಂತೆ ದರ ನಿಗಧಿಪಡಿಸಿ ಪ್ರತಿ ರೈತರಿಂದ ಗರಿಷ್ಟ 20 ಕ್ವಿಂಟಾಲ್‌ಗೆ ಮೀರದಂತೆ ತೊಗರಿಯನ್ನು ವಾಣಿಜ್ಯ ರೀತ್ಯಾ ಕರ್ನಾಟಕ ತೊಗರಿ ಅಭಿವೃದ್ಧಿ ಮಂಡಳಿ, ಗುಲ್ಬರ್ಗಾ, ಇವರು ಎನ್.ಸಿ.ಡಿ.ಇ.ಎಕ್ಸ್ ಇವರ ಸಹಯೋಗದೊಂದಿಗೆ ದಿನಾಂಕ: 25.12.2013 ರಿಂದಲೇ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ಮತ್ತು ಈ ಪ್ರಕ್ರಿಯೆಗಾಗಿ ಕರ್ನಾಟಕ ತೊಗರಿ ಅಭಿವೃದ್ಧಿ ಮಂಡಳಿಗೆ ₹ 20.00 ಕೋಟಿಗಳನ್ನು ಆವರ್ತನಿಧಿಯಿಂದ ಸಾಲದ ರೂಪದಲ್ಲಿ ಬಿಡುಗಡೆ ಮಾಡಲು ತೀರ್ಮಾನಿಸಿರುವುದರಿಂದ ಈ ಕೆಳಗಿನಂತೆ ಆದೇಶವನ್ನು ಹೊರಡಿಸಿದೆ.

ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2013–14ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ತೊಗರಿಯನ್ನು ರೈತರಿಂದ ವಾಣಿಜ್ಯ ರೀತ್ಯಾ ಪ್ರತಿ ಕ್ವಿಂಟಾಲಿಗೆ ₹ 4300/–ಗಳ ಜೊತೆಗೆ ರಾಜ್ಯ ಸರ್ಕಾರದಿಂದ ₹ 700/–ಗಳನ್ನು ಪ್ರತಿ ಕ್ವಿಂಟಲಿಗೆ ಸಹಾಯಧನ ನೀಡಿ ಒಟ್ಟು ಪ್ರತಿ ಕ್ವಿಂಟಲಿಗೆ ₹ 5000/– ರಂತೆ ಕರ್ನಾಟಕ ತೊಗರಿ ಅಭಿವೃದ್ಧಿ ಮಂಡಳಿ ನಿಯಮಿತ, ಗುಲ್ಬರ್ಗಾ ಇವರು ಎನ್.ಸಿ.ಡಿ.ಇ.ಎಕ್ಸ್ ಇವರ ಸಹಯೋಗದೊಂದಿಗೆ ತಕ್ಷಣದಿಂದ ತೊಗರಿಯನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಖರೀದಿಸಲು ಆದೇಶಿಸಿದೆ ಮತ್ತು ಈ ಖರೀದಿ ಪ್ರಕ್ರಿಯೆಗಾಗಿ ಆವರ್ತನಿಧಿಯಿಂದ ಸಾಲದ ರೂಪದಲ್ಲಿ ಅವಶ್ಯಕತೆಗನುಗುಣವಾಗಿ ಹಂತ ಹಂತವಾಗಿ ₹ 20.00 ಕೊಟಿ (ರೂಪಾಯಿ ಇಪ್ಪತ್ತು ಕೋಟಿಗಳು ಮಾತ್ರ) ಗಳನ್ನು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತೊಗರಿ ಅಭಿವೃದ್ಧಿ ಮಂಡಳಿ, ನಿಯಮಿತ, ಗುಲ್ಬರ್ಗಾ ಇವರಿಗೆ ಬಿಡುಗಡೆ ಮಾಡಲು ಅನುಮತಿ ನೀಡಿದೆ.

(1) ಎಫ್.ಎ.ಕ್ಯೂ. ಗುಣಮಟ್ಟದ ತೊಗರಿಯನ್ನು ಮಾತ್ರ ಖರೀದಿಸತಕ್ಕದ್ದು

(2) ಪ್ರತಿ ರೈತರಿಂದ ಗರಿಷ್ಟ 20 ಕ್ವಿಂಟಾಲ್ ಮೀರದಂತೆ ತೊಗರಿಯನ್ನು ಖರೀದಿಸತಕ್ಕದ್ದು

(3) ಖರೀದಿಸಿದ ವಿವರಗಳನ್ನು ಪ್ರತಿ 15 ದಿನಗಳಿಗೊಮ್ಮೆ ಸರ್ಕಾರದ ಕಾರ್ಯದರ್ಶಿಯವರು, ಸಹಕಾರ ಇಲಾಖೆ, ಹಾಗೂ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ, ಬೆಂಗಳೂರು ಇವರಿಗೆ ಸಲ್ಲಿಸತಕ್ಕದ್ದು

(4) ಹಣವನ್ನು ಬಿಡುಗಡೆ ಮಾಡಿದ ಬಗ್ಗೆ ವಾರಕ್ಕೊಮ್ಮೆ ವಿವರಗಳೊಂದಿಗೆ ಸರ್ಕಾರದ ಕಾರ್ಯದರ್ಶಿಯವರು, ಸಹಕಾರ ಇಲಾಖೆ ಹಾಗೂ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ, ಬೆಂಗಳೂರು, ಇವರಿಗೆ ವಿಮರ್ಶಿಸಲು ಸಲ್ಲಿಸತಕ್ಕದ್ದು

(5) ಖರೀದಿಸಿದ ತೊಗರಿ ಮೌಲ್ಯವನ್ನು ರೈತರಿಗೆ RTGS ಮೂಲಕವೇ ಪಾವತಿ ಮಾಡಲು ಕ್ರಮ ಕೈಗೊಳ್ಳತಕ್ಕದ್ದು

(6) ಈ ಖರೀದಿ ಪ್ರಕ್ರಿಯೆಯು ದಿನಾಂಕ:31.03.2014 ರವರೆಗೆ ಅಥವಾ ಮಾರುಕಟ್ಟೆ ದರ ಸ್ಥಿರತೆಗೊಳ್ಳುವವರೆವಿಗೂ ಯಾವುದು ಮೊದಲು ಅಲ್ಲಿಯವರೆಗೆ ನಿರ್ವಹಿಸುವುದು

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
(ಈ. ಪಾಪಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಹಕಾರ ಇಲಾಖೆ

ಇವರಿಗೆ:

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು–560 001
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ಮತ್ತು ಕೃಷಿ ಉತ್ಪನ್ನ ಆಯುಕ್ತರು ವಿಧಾನಸೌಧ
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ ವಿಧಾನಸೌಧ
4. ಜಿಲ್ಲಾಧಿಕಾರಿ, ಗುಲ್ಬರ್ಗಾ ಜಿಲ್ಲೆ, ಗುಲ್ಬರ್ಗಾ
5. ನಿರ್ದೇಶಕರು, ಕೃಷಿ ಮಾರಾಟ ಇಲಾಖೆ, ನಂ:16, 2ನೇ ರಾಜಭವನ ರಸ್ತೆ, ಬೆಂಗಳೂರು
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ, ನಂ:16, 2ನೇ ರಾಜಭವನ ರಸ್ತೆ, ಬೆಂಗಳೂರು
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ತೊಗರಿ ಅಭಿವೃದ್ಧಿ ಮಂಡಳಿ ನಿಯಮಿತ, ಗುಲ್ಬರ್ಗಾ
8. ಮಾನ್ಯ ಕಾನೂನು, ಸಂಸದೀಯ ಮತ್ತು ಪಶುಸಂಗೋಪನಾ ಸಚಿವರು ಹಾಗೂ ಅಧ್ಯಕ್ಷರು, ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳ

ಬೆಲೆ ಸ್ಥಿರೀಕರಣ ಸಚಿವ ಸಂಪುಟ ಉಪ ಸಮಿತಿ ರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ

9. ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ
10. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಸಹಕಾರ ಇಲಾಖೆ
11. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಹಕಾರ ಇಲಾಖೆ
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ

ಕೃಷಿ ಇಲಾಖೆಯಲ್ಲಿ ಖಾಲಿ ಹುದ್ದೆಗಳು

292(697); ಶ್ರೀ ಮಲ್ಲಿಕಾರ್ಜುನ ಸಿದ್ದರಾಮಪ್ಪ ಖೂಬಾ (ಬಸವಕಲ್ಯಾಣ)

ಅ) ಹೈದ್ರಾಬಾದ್ ಕರ್ನಾಟಕ ಪ್ರದೇಶದ ವ್ಯಾಪ್ತಿಯ ಜಿಲ್ಲೆಗಳಲ್ಲಿ ಕೃಷಿ ಇಲಾಖೆಗೆ ಮಂಜೂರಾಗಿರುವ ಎಲ್ಲ ಬಗೆಯ ಹುದ್ದೆಗಳ ಸಂಖ್ಯೆ ಎಷ್ಟು;

ಆ) ಈ ಪೈಕಿ ಎಷ್ಟು ಭರ್ತಿಯಾಗಿವೆ ಮತ್ತು ಯಾವ ಯಾವ ಹುದ್ದೆಗಳು ಎಷ್ಟು ಸಮಯದಿಂದ ಖಾಲಿ ಇವೆ; ಇದಕ್ಕೆ ಕಾರಣಗಳೇನು;

ಇ) ಈ ಭಾಗದ ಜಿಲ್ಲೆಗಳಲ್ಲಿ ಹಲವಾರು ಹುದ್ದೆಗಳು ಖಾಲಿ ಇರುವುದರಿಂದ ರೈತರು ಮತ್ತು ಜನಸಾಮಾನ್ಯರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಮುಂದಿರುವ ಕ್ರಮಗಳೇನು?